ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

14

ಶಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ [illegible]

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 30/1/21

# ಪ್ರಾಣೇಶ್ ಉಪಸಭಾಪತಿ; ಹೊರಟ್ಟಿಗೆ ಸಭಾಪತಿ ಸುಸೂತ್ರ

ಸಂ.ಕ.ಸಮಾಚಾರ, ಬೆಂಗಳೂರು 30/1/21

ನಿರೀಕ್ಷೆಯಂತೆ ಮೇಲ್ಮನೆಯ ಉಪಸಭಾಪತಿಯಾಗಿ ಆಡಳಿತಾರೂಢ ಬಿಜೆಪಿ ಸದಸ್ಯ ಎಂ.ಕೆ.ಪ್ರಾಣೇಶ್ ಅವರು ಚುನಾಯಿತರಾಗಿದ್ದಾರೆ.

ಶುಕ್ರವಾರ ಮೇಲ್ಮನೆಯ ಕಲಾಪ ಆರಂಭವಾದ ಕೆಲವೇ ಹೊತ್ತಿನಲ್ಲಿ ನಡೆದ ಉಪಸಭಾಪತಿ ಚುನಾವಣೆಯಲ್ಲಿ ಪೂರ್ವ ನಿರ್ಧಾರಿತ ಮೈತ್ರಿಯಂತೆ ಜೆಡಿಎಸ್ ಸದಸ್ಯರು ಬಿಜೆಪಿ ಅಭ್ಯರ್ಥಿ ಪ್ರಾಣೇಶ್‌ಗೆ ಬೆಂಬಲ ನೀಡಿದ ಹಿನ್ನೆಲೆಯಲ್ಲಿ ಪ್ರಾಣೇಶ್ ನೂತನ ಉಪಸಭಾಪತಿಯಾಗಿ ಆಯ್ಕೆಗೊಂಡರು. ಹಿರಿಯ ಸದಸ್ಯ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಕೆ.ಸಿ.ಕೊಂಡಯ್ಯ ಪರಾಜಿತಗೊಂಡರು.

ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಅವರು ಧ್ವನಿಮತದ ಚುನಾವಣೆಗೆ ಮುಂದಾದರಾದರೂ ಕಾಂಗ್ರೆಸ್ ಸದಸ್ಯರ ಒತ್ತಾಯದ ಮೇರೆಗೆ ನಡೆದ ಮತ ವಿಭಜನೆಯಲ್ಲಿ ಎಂ.ಕೆ.ಪ್ರಾಣೇಶ್ ಅವರ ಪರವಾಗಿ 41 ಮತಗಳು ಬಂದವು. 24 ಮತಗಳನ್ನಷ್ಟೇ ಪಡೆದ ಕಾಂಗ್ರೆಸ್ ಅಭ್ಯರ್ಥಿ ಕೆ.ಸಿ. ಕೊಂಡಯ್ಯ ಅವರು ಪರಾಭವಗೊಳ್ಳುವುದರೊಂದಿಗೆ ಪ್ರಾಣೇಶ್ ಅವರು ಉಪಸಭಾಪತಿಯಾಗಿ ಆಯ್ಕೆಯಾದರು. ಬಿಜೆಪಿ-ಜೆಡಿ-





ಎಸ್ ಮೈತ್ರಿಕೂಟದ ನಾಲ್ವರು ಮತ್ತು ಕಾಂಗ್ರೆಸ್‌ನ ಆರು ಸದಸ್ಯರು ಚುನಾವಣೆಯಲ್ಲಿ ಪಾಲ್ಗೊಳ್ಳದೇ ಗೈರಾಗಿದ್ದರು.

ಉಪಸಭಾಪತಿ ಚುನಾವಣೆ ಸುಸೂತ್ರವಾಗಿ ನಡೆದ ಬೆನ್ನಲ್ಲೇ ಎಲ್ಲರ ಚಿತ್ತ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರ ಮುಂದಿನ ನಡೆಯ ಮೇಲೆ ನೆಟ್ಟಿದೆ. ಮೇಲ್ಮನೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಅಧಿಕೃತವಾಗಿ ಜಾಹೀರಾಗಿರುವ ಹಿನ್ನೆಲೆಯಲ್ಲಿ ಸಭಾಪತಿಗಳು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದು ಬಹುತೇಕ ಖಚಿತವಾಗಿದೆ. ಸಭಾಪತಿ ರಾಜೀನಾಮೆ ನೀಡಿದರೆ ಉಪಸಭಾಪತಿ ಪ್ರಾಣೇಶ್ ಅವರ ಅಧ್ಯಕ್ಷತೆಯಲ್ಲಿ ಸಭಾಪತಿ ಸ್ಥಾನದ ಚುನಾವಣೆ ನಡೆಯಲಿದ್ದು ನಿರೀಕ್ಷೆಯಂತೆಯೇ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಅವರು ಸಭಾಪತಿಯಾಗಿ ಆಯ್ಕೆಯಾಗಲಿದ್ದಾರೆ.

ಸಂಘ ಪರಿವಾರದ ನೆಲೆಯಿಂದ ಸಾರ್ವಜನಿಕ ಜೀವನಕ್ಕೆ ಮುಂದಡಿಯಿಟ್ಟ ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನವರಾದ ಎಂ.ಕೆ. ಪ್ರಾಣೇಶ್ ಅವರು ಮಾಜಿ ಸಚಿವ ಸಿ.ಟಿ.ರವಿ ಅವರ ದೂರದ ಸಂಬಂಧಿ ಕೂಡ. ಸ್ಥಳೀಯ ಸಂಸ್ಥೆಗಳ ಚುನಾವಣೆಯ ಮೂಲಕ ಇದೇ ಮೊದಲ ಬಾರಿಗೆ ಮೇಲ್ಮನೆಗೆ ಆಯ್ಕೆಯಾಗಿರುವ ಪ್ರಾಣೇಶ್ ಅವರಿಗೆ ಮೊದಲ ಅವಧಿಯಲ್ಲೇ ಉಪಸಭಾಪತಿ ಸ್ಥಾನ ಒಲಿದಿರುವುದು ವಿಶೇಷ.